# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1163 |
| ಸದಸ್ಯರ ಹೆಸರು | ಡಾ. ಡಿ.ತಿಮ್ಮಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | 17-12-2025 |
| ಉತ್ತರಿಸುವ ಸಚಿವರು | ಲೋಕೋಪಯೋಗಿ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮೈಸೂರು ಜಿಲ್ಲೆ ಚಾಮುಂಡಿ ಬೆಟ್ಟದ ನಂದಿ ರಸ್ತೆ ತಡೆಗೋಡೆ ಕಾಮಗಾರಿ ಸ್ಥಗಿತವಾಗಿರುವುದು ನಿಜವೇ, ಇದಕ್ಕೆ ಕಾರಣಗಳೇನು, ತಡೆಗೋಡೆ ನಿರ್ಮಾಣ ಕಾಮಗಾರಿ ಮುಂದುವರೆಸಲಾಗುವುದೇ? | • ಮೈಸೂರು ಜಿಲ್ಲೆ ಚಾಮುಂಡಿ ಬೆಟ್ಟದ ಹೊಸ ನಂದಿ ರಸ್ತೆಯು ಜಿಲ್ಲಾ ಮುಖ್ಯ ರಸ್ತೆಯಾಗಿದ್ದು, ಒಟ್ಟು 1.40 ಕಿ.ಮೀ ಉದ್ದ ಇರುತ್ತದೆ.<br>• 2021ನೇ ಸಾಲಿನಲ್ಲಿ ಸುರಿದ ಭಾರಿ ಮಳೆಯಿಂದಾಗಿ ಉಂಟಾದ ಭೂ ಕುಸಿತದಲ್ಲಿ ಸದರಿ ರಸ್ತೆಯಲ್ಲಿ ಸರಪಳಿ: 0.80 ರಿಂದ 1.15 ಕಿ.ಮೀ ವರೆಗೆ ಇಲ್ಲಿ ( 8 ರಿಂದ 12 ಮೀಟರ್ ಆಳದಷ್ಟು) ರಸ್ತೆ ಸಮೇತವಾಗಿ ತಡೆಗೋಡೆ ಕುಸಿದಿರುತ್ತದೆ. ಆದ್ದರಿಂದ ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ರಸ್ತೆಯಲ್ಲಿ ವಾಹನ ಸಂಚಾರವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿರುತ್ತದೆ.<br>• ಈ ಸಂಬಂಧ ರಸ್ತೆಯನ್ನು ಅಭಿವೃದ್ಧಿ ಪಡಿಸುವ ಕುರಿತು ಭಾರತೀಯ ವಿಜ್ಞಾನ ಸಂಸ್ಥೆಯ ತಜ್ಞರಿಂದ ವರದಿ ಪಡೆದು, ಅದರಂತೆ ರೂ.975.00 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಿ, ಕಾಮಗಾರಿಗೆ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆದು ಗುತ್ತಿಗೆ ಆಧಾರದ ಮೇಲೆ ಶ್ರೀ ಯು.ವಿ. ರಾಮಾಂಜನೇಯುಲು (ಅಯ್ಯಪ್ಪ ಕನ್‌ಸ್ಟ್ರಕ್ಷನ್ಸ್), 1ನೇ ದರ್ಜೆ ಗುತ್ತಿಗೆದಾರರಿಗೆ 9 ತಿಂಗಳ ಕಾಲಾವಕಾಶದೊಂದಿಗೆ ಕಾಮಗಾರಿಯನ್ನು ಪೂರ್ಣಗೊಳಿಸಲು ರೂ. 977.43 ಲಕ್ಷಗಳಿಗೆ (ಜಿ.ಎಸ್.ಟಿ ಹೊರತುಪಡಿಸಿ) ವಹಿಸಲಾಗಿರುತ್ತದೆ. ಸದರಿ ಕಾಮಗಾರಿಯನ್ನು ದಿನಾಂಕ:13.08.2022 ರಂದು ಪ್ರಾರಂಭಿಸಲಾಗಿರುತ್ತದೆ. ಸದರಿ ಕಾಮಗಾರಿ ನಿರ್ಮಾಣ ಸಂಬಂಧ ಕೆಲವು ತಾಂತ್ರಿಕ ಕಾರಣಗಳಿಂದ ಪ್ರಗತಿಯಲ್ಲಿ ವಿಳಂಬವಾಗಿರುತ್ತದೆ. ಪ್ರಸ್ತುತ ಅನುಮೋದಿತ ಪರಿಷ್ಕೃತ ಅಂದಾಜಿನಂತೆ ಶೇ.90 ರಷ್ಟು ಕಾಮಗಾರಿಯು ಪೂರ್ಣಗೊಂಡಿದ್ದು, ಕಾಮಗಾರಿ ಪ್ರಗತಿಯಲ್ಲಿದ್ದು, ಮಾರ್ಚ್-2026 ರ ಅಂತ್ಯದೊಳಗೆ ಪೂರ್ಣಗೊಳಿಸಲಾಗುವುದು. |
| ಆ) | ಈ ಕಾಮಗಾರಿಗೆ ಮಂಜೂರಾಗಿರುವ ಒಟ್ಟು ಅನುದಾನವೆಷ್ಟು? | |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| | | • 2022ನೇ ಸಾಲಿನಲ್ಲಿ ಬಿದ್ದ ಭಾರಿ ಮಳೆಗೆ ಸದರಿ ರಸ್ತೆಯ ಸರಪಳಿ 0.60 ರಿಂದ 0.75 ಕಿ.ಮೀ ವರೆಗೆ ತಡೆಗೋಡೆಯು ಸುಮಾರು 6.00 ರಿಂದ 8.00 ಮೀ ಆಳದಷ್ಟು ರಸ್ತೆಯ ಸಮೇತವಾಗಿ ಕುಸಿದಿರುತ್ತದೆ. ಈ ಸಂಬಂಧ ಕಾಮಗಾರಿ ಅಂದಾಜನ್ನು ರೂ.498.00 ಲಕ್ಷಗಳಿಗೆ ತಯಾರಿಸಿ, ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆದು ಗುತ್ತಿಗೆ ಆಧಾರದ ಮೇಲೆ ಶ್ರೀ ಎ.ಬಿ.ಚನ್ನಬಸವಯ್ಯ (ಮೆ:ಎ.ಬಿ.ಸಿ ಕನ್‌ಸ್ಟ್ರಕ್ಷನ್), 1ನೇ ದರ್ಜೆ ಗುತ್ತಿಗೆದಾರರಿಗೆ 9 ತಿಂಗಳ ಕಾಲಾವಕಾಶದೊಂದಿಗೆ ಕಾಮಗಾರಿಯನ್ನು ಪೂರ್ಣಗೊಳಿಸಲು ರೂ.412.38 ಲಕ್ಷಗಳಿಗೆ (ಜಿ.ಎಸ್.ಟಿ ಹೊರತುಪಡಿಸಿ) ವಹಿಸಲಾಗಿರುತ್ತದೆ. ಅದರಂತೆ ಕಾಮಗಾರಿಯನ್ನು ಪ್ರಾರಂಭಿಸಿ ಸೆಪ್ಟಂಬರ್ –2025 ರಲ್ಲಿ ಪೂರ್ಣಗೊಳಿಸಲಾಗಿರುತ್ತದೆ. |

ಲೋಇ 142 ಸಿಕ್ಯೂಎನ್ 2025(ಇ)

(ಸತೀಶ ಜಾರಕಿಹೊಳಿ)
ಲೋಕೋಪಯೋಗಿ ಸಚಿವರು